ಶನಿವಾರ,27.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 113
Digital Varthe Kannada Daily
Volume 01 - Issue 113
Saturday 27.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಮದುವೆಯಾಗು ಎಂದಿದ್ದಕ್ಕೆ ಕತ್ತು ಸೀಳಿ ಕೊಂದ ಪ್ರಿಯಕರ



**ಬೆಂಗಳೂರು:** ಕುಮಾರಸ್ವಾಮಿ ಲೇಔಟ್‌ನ ಮನೆಯೊಂದರಲ್ಲಿ ಒಂಟಿಯಾಗಿದ್ದ ಸ್ಟಾಫ್ ನರ್ಸ್ ಅನ್ನು ಭೀಕರವಾಗಿ ಹತ್ಯೆಗೈದ ಘಟನೆ ಡಿಸೆಂಬರ್ 24ರ ರಾತ್ರಿ ನಡೆದಿದೆ. ಆಕೆ ಬಾಡಿಗೆ ಮನೆಯಲ್ಲಿ ಒಂಟಿಯಾಗಿದ್ದ ಸಂದರ್ಭದಲ್ಲಿ ಮನೆಯೊಳಗೆ ಪ್ರವೇಶಿದ ಆಕೆಯ ಪ್ರಿಯಕರ, ಕತ್ತುಕುಯ್ದು ಆಕೆಯ ಹತ್ಯೆ ಮಾಡಿರುವುದು ತಿಳಿದುಬಂದಿದೆ. ಮಾಹಿತಿ ಸಿಕ್ಕ ಕೂಡಲೆ ಕುಮಾರಸ್ವಾಮಿ ಲೇಔಟ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದ್ದು, ಆರೋಪಿ ಯನ್ನು ಬಂಧಿಸ ಲಾಗಿದೆ.

**ಮದುವೆಯಾಗದೇ ಒಂಟಿಯಾಗಿದ್ದ ಸ್ಟಾಫ್ ನರ್ಸ್**

39 ವರ್ಷವಾದರೂ ಮದುವೆಯಾಗದೆ ಒಂಟಿಯಾಗಿದ್ದ ಮಮತಾ, ಜಯದೇವ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಕುಮಾರಸ್ವಾಮಿ ಲೇಔಟ್‌ನಲ್ಲಿ ತಮ್ಮ ಸ್ನೇಹಿತೆಯೊಂದಿಗೆ ಬಾಡಿಗೆ ಮನೆ ಮಾಡಿಕೊಂಡಿದ್ದರು. ಡಿಸೆಂಬರ್ 24ರಂದು ಆಕೆಯ ಸ್ನೇಹಿತೆ ಊರಿಗೆ ತೆರಳಿದ್ದರಿಂದ ಆ ದಿನ ರಾತ್ರಿ ಮಮತಾ ಒಬ್ಬರೇ ಮನೆಯಲ್ಲಿದ್ದರು. ಇದೇ ಸಮಯಕ್ಕೆ ಕಾದು ಕುಳಿತಿದ್ದ ಆರೋಪಿ ಸುಧಾಕರ್, ರಾತ್ರೋ ರಾತ್ರಿ ಆಕೆಯ ಕತ್ತು ಸೀಳಿ ಹತ್ಯೆ ಮಾಡಿದ್ದಾನೆಂದು ತಿಳಿದುಬಂದಿದೆ. ಡಿಸೆಂಬರ್ 25ರಂದು ಬೆಳಗ್ಗೆ 11 ಗಂಟೆ ಸುಮಾರಿಗೆ ಪ್ರಕರಣ ಬೆಳಕಿಗೆ ಬಂದಿದೆ. ಹತ್ಯೆಯ ಮಾಹಿತಿ ದೊರಕುತ್ತಿದ್ದಂತೆ, ಕುಮಾರಸ್ವಾಮಿ ಲೇಔಟ್ನ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

**ತನ್ನನ್ನು ಮದುವೆಯಾಗದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುತ್ತೇನೆಂದಿದ್ದ ಮಮತಾ**

ಸುಧಾಕರ್ ಮತ್ತು ಮಮತಾ ಕಳೆದ ಒಂದು ವರ್ಷದಿಂದ ಪರಸ್ಪರ ಪ್ರೀತಿಯಲ್ಲಿದ್ದರು. ಮಮತಾ ತನಗಿಂತ ವಯಸ್ಸಿನಲ್ಲಿ ಹಿರಿಯವರೆಂದು ತಿಳಿಯದ ಸುಧಾಕರ್ ಪ್ರೀತಿಯಲ್ಲಿ ಬಿದ್ದಿದ್ದ. ಆದರೆ ಸುಧಾಕರ್‌ಗೆ ಇತ್ತೀಚೆಗೆ ಕುಟುಂಬಸ್ಥರು ಬೇರೆ ಯುವತಿಯೊಂದಿಗೆ ನಿಶ್ಚಿತಾರ್ಥ ಮಾಡಿಸಿದ್ದರು. ಈ ವಿಷಯ ತಿಳಿದ ಮಮತಾ, ಕೋಪಗೊಂಡು ತನ್ನನ್ನೇ ಮದುವೆಯಾಗಬೇಕು ಎಂದು ಒತ್ತಾಯಿಸಿದ್ದರು. ಅಷ್ಟೇ ಅಲ್ಲದೇ ತನ್ನನ್ನು ಬಿಟ್ಟು ಬೇರೆ ಮದುವೆಯಾದರೆ ತಾನು ಆತ್ಮಹತ್ಯೆ ಮಾಡಿಕೊಂಡು ಸುಧಾಕರ್ ಹಾಗೂ ಅವರ ಕುಟುಂಬವನ್ನು ಸಂಕಷ್ಟಕ್ಕೆ ಒಳಪಡಿಸುವುದಾಗಿ ಬೆದರಿಕೆ ಹಾಕಿದ್ದರು ಎಂದು ತನಿಖೆಯ ವೇಳೆ ತಿಳಿದುಬಂದಿದೆ. ಈ ಒತ್ತಡದಿಂದ ಆತಂಕಕ್ಕೊಳಗಾದ ಸುಧಾಕರ್, ಮಮತಾಳನ್ನು ಹತ್ಯೆ ಮಾಡಲು ನಿರ್ಧರಿಸಿದ್ದ. ಡಿಸೆಂಬರ್ 24ರಂದು ಮಮತಾ ಒಬ್ಬರೇ ಇದ್ದ ಸಂದರ್ಭ ಮನೆಗೆ ತೆರಳಿ ಈ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ.

## ಮೃತರ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ 5 ಲಕ್ಷ ರೂ. ಪರಿಹಾರ

**ಬೆಂಗಳೂರು:** ಇತ್ತೀಚೆಗೆ ರಸ್ತೆಯಲ್ಲಿ ನಡೆದು ಕೊಂಡು ಹೋಗುವ ಹೆಣ್ಣು ಮಕ್ಕಳ ಜೊತೆ ಅಸಭ್ಯ ವಾಗಿ ವರ್ತಿ ಸುವ ಪ್ರಕರಣ ವೊಂದು ಸುದ್ದಿಯಾಗಿತ್ತು. ಇದೀಗ ಬೆಂಗಳೂರಿನ ಆಸ್ಪತ್ರೆಯೊಂದರಲ್ಲಿ ಸೈಕೋ ಸಿಬ್ಬಂದಿ ಯೊಬ್ಬ ಮಹಿಳಾ ನರ್ಸ್‌ಗಳ ಖಾಸಗಿ ವೀಡಿಯೋ ಮಾಡುತ್ತಿದ್ದ ಘಟನೆ ಬೆಳಕಿಗೆ ಬಂದಿದೆ. ಆರೋಪಿಯ ಈ ಕೃತ್ಯವು ವೈದ್ಯರ ಗಮನಕ್ಕೆ ಬಂದ ನಂತರ ಪೊಲೀಸರಲ್ಲಿ ದೂರು ನೀಡಲಾಗಿದ್ದು, ಕಾಮುಕನನ್ನು ಬಂಧಿಸಲಾಗಿದೆ

**ನರ್ಸ್‌ಗಳು ಬಟ್ಟೆ ಬದಲಿಸುವ ವೀಡಿಯೋ ಮಾಡುತ್ತಿದ್ದ!**



ನಗರದ ನಾಗರಬಾವಿ ವ್ಯಾಪ್ತಿಯ ಖಾಸಗಿ ಆಸ್ಪತ್ರೆಯೊಂದರಲ್ಲಿ ಆಪರೇಷನ್ ಥಿಯೇಟರ್‌ನಲ್ಲಿ ಕೆಲಸ ಮಾಡುತ್ತಿದ್ದ ಸಿಬ್ಬಂದಿಯೊಬ್ಬ ತನ್ನ ಮಹಿಳಾ ಸಹೋದ್ಯೋಗಿಗಳ ಖಾಸಗಿ ಫೋಟೋ ತೆಗೆದು ಸಿಕ್ಕಿಹಾಕಿಕೊಂಡಿದ್ದಾನೆ. ಆರೋಪಿಯನ್ನು ಸುವೆಂದು ಮೊಹಂತ ಎಂದು ಗುರುತಿಸ ಲಾಗಿದೆ. ಈತ ಲೇಡಿ ನರ್ಸ್‌ಗಳು ಬಟ್ಟೆ ಬದಲಿಸುವ ಸಂದರ್ಭದಲ್ಲಿ ಫೋಟೋ ಮತ್ತು ವೀಡಿಯೋ ಚಿತ್ರಿಸಿ ವಿಕೃತಿ ಮೆರೆದಿದ್ದ. ಕಾಮುಕನ ಈ ಕೃತ್ಯವನ್ನು ಗಮನಿಸಿದ್ದ ನರ್ಸ್‌ವೊಬ್ಬರು ತಕ್ಷಣವೇ ಈ ವಿಷಯವನ್ನು ಆಸ್ಪತ್ರೆಯ ವೈದ್ಯರ ಗಮನಕ್ಕೆ ತಂದಿದ್ದರು. ವಿಷಯ ತಿಳಿದ ಕೂಡಲೆ ಖಾಸಗಿ ಆಸ್ಪತ್ರೆಯ ವೈದ್ಯ ಡಾ. ಚೇತನ್ ಅವರು ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

**ಕಾಮುಕನನ್ನು ಬಂಧಿಸಿದ ಪೊಲೀಸರು**

ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸಿದಾಗ ಆರೋಪಿ ಸುವೆಂದು ಮೊಹಂತ ಕಳೆದ ಒಂದು ವರ್ಷದಿಂದ ಅದೇ ಖಾಸಗಿ ಆಸ್ಪತ್ರೆಯ ಆಪರೇಷನ್ ಥಿಯೇಟರ್‌ನಲ್ಲಿ ಕೆಲಸ ಮಾಡುತ್ತಿದ್ದನೆಂದು ತಿಳಿದುಬಂದಿದೆ. ಅದಲ್ಲದೇ ಆರೋಪಿಯ ಮೊಬೈಲ್ ಪರಿಶೀಲನೆ ವೇಳೆ ಮಹಿಳಾ ಸಹೋದ್ಯೋಗಿಗಳ ಖಾಸಗಿ ಫೋಟೋ ಮತ್ತು ವೀಡಿಯೋಗಳು ಪತ್ತೆಯಾಗಿವೆ ಎನ್ನಲಾಗಿದೆ.

ಘಟನೆಗೆ ಸಂಬಂಧಿಸಿ ದಂತೆ ಅನ್ನಪೂರ್ಣೇಶ್ವರಿ ನಗರ ಪೊಲೀಸರು ಆರೋಪಿ ಸುವೆಂದುಮೊಹಂತನನ್ನು ಬಂಧಿಸಿದ್ದು, ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

## ಶಕ್ತಿ ಯೋಜನೆಯೇ ಬಂಡವಾಳ, ಮಹಿಳೆಯರೇ ಟಾರ್ಗೆಟ್



**ಕಲಬುರಗಿ:** ಮಹಿಳೆಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯ ಸಾರಿಗೆಯ ಸಾಮಾನ್ಯ ಬಸ್‌ಗಳಲ್ಲಿ ಉಚಿತ ಪ್ರಯಾಣ ವ್ಯವಸ್ಥೆಯನ್ನು ಸರ್ಕಾರ ಶಕ್ತಿ ಯೋಜನೆಯಡಿ ಕಲ್ಪಿಸಿದೆ. ಆದ್ರೆ ಇದೇ ಫ್ರೀ ಬಸ್ ಸ್ಕೀಂನ ಬಂಡವಾಳ ಮಾಡಿಕೊಂಡು ಮಹಿಳಾ ಪ್ರಯಾಣಿಕರ ಆಭರಣಗಳನ್ನು ಕದಿಯುತ್ತಿದ್ದ ಖತರ್ನಾಕ್ ಲೇಡಿ ಗ್ಯಾಂಗ್ ಒಂದನ್ನು ಕಲಬುರಗಿ ಜಿಲ್ಲಾ ಪೊಲೀಸರು ಬಂಧಿಸಿದ್ದಾರೆ.

ಕಲಬುರಗಿ ನಗರದ ಮಾಂಗರವಾಡಿ ಬಡಾವಣೆಯ ನಿವಾಸಿಗಳಾದ ಚಿಮನ್ ಕಾಂಬಳೆ, ಶಕೀಲಾಬಾಯಿ ಉಪಾಧ್ಯಾ ಮತ್ತು ಮಾಧುರಿ ಬಂಧಿತ ಆರೋಪಿಗಳಾಗಿದ್ದಾರೆ. ಕಳ್ಳತನವನ್ನೇ ಇವರು ವೃತ್ತಿ ಮಾಡಿಕೊಂಡಿದ್ದು, ರಾಜ್ಯ ಸರ್ಕಾರದ ಶಕ್ತಿ ಯೋಜನೆಯನ್ನ ಇದಕ್ಕಾಗಿ ಇವರು ಬಂಡವಾಳ ಮಾಡಿಕೊಂಡಿದ್ದರು. ಕಲಬುರಗಿ ನಗರದಿಂದ ಜಿಲ್ಲೆಯ ಸೇಡಂ, ಶಹಾಬಾದ್ ಸೇರಿ ಹಲವೆಡೆ ಉಚಿತ ಪ್ರಯಾಣ ಮಾಡಿ ಕಳ್ಳತನ ಮಾಡುತ್ತಿದ್ದರು ಎಂಬುದು ತನಿಖೆ ವೇಳೆ ಗೊತ್ತಾಗಿದೆ.

ಬಸ್ ನಿಲ್ದಾಣಗಳಲ್ಲಿ ಓಡಾಡಿಕೊಂಡು ಚಿನ್ನಾಭರಣ ಧರಿಸಿದ್ದ ಮಹಿಳಾ ಪ್ರಯಾಣಿಕರನ್ನ ಮೊದಲು ಈ ಗ್ಯಾಂಗ್ ಗಮನಿಸುತ್ತಿತ್ತು. ಆ ಬಳಿಕ ಮಹಿಳಾ ಪ್ರಯಾಣಿಕರು ಬಸ್ ಹತ್ತುವ ವೇಳೆ ಎಂಟ್ರಿ ಕೊಡ್ತಿದ್ದ ಇವರು, ಅವರನ್ನು ಸುತ್ತುವರಿಯುತ್ತಿದ್ದರು. ಗಮನ ಬೇರೆಡೆ ಸೆಳೆದು ಚಿನ್ನದ ನೆಕ್ಲೇಸ್, ಪದಕ, ಉಂಗುರ, ಕಿವಿ ಓಲೆ, ಮಾಂಗಲ್ಯ ಸರಗಳನ್ನು ಕ್ಷಣಾರ್ಧದಲ್ಲಿ ಕಟ್ ಮಾಡಿ ಯಾರಿಗೂ ಅನುಮಾನ ಬಾರದಂತೆ ಎಸ್ಕೇಪ್ ಆಗುತ್ತಿದ್ದರು ಎನ್ನಲಾಗಿದೆ. ಹಲವು ತಿಂಗಳಿಂದ ಮಹಿಳಾ ಪ್ರಯಾಣಿಕರ ನಿದ್ದೆಗೆಡಿಸಿದ್ದ ಈ ಮೂವರು ಸರಗಳ್ಳಿಯರನ್ನು ಕೊನೆಗೂ ಖಾಕಿ ಹೆಡೆಮುರಿ ಕಟ್ಟಿದೆ.

ಸಿಸಿ ಕ್ಯಾಮರಾಗಳಲ್ಲಿ ಸೆರೆಯಾಗಿದ್ದ ಆರೋಪಿಗಳ ಚಲನವಲನಗಳನ್ನು ಆಧರಿಸಿ ಪೊಲೀಸರು ಗ್ಯಾಂಗ್ ಭೇದಿಸಿದ್ದಾರೆ. ಇವರ ವಿರುದ್ಧ ಸೇಡಂ ಹಾಗೂ ಶಹಾಬಾದ್ ಠಾಣೆಯಲ್ಲಿ ಒಟ್ಟು ಮೂರು ಸರಗಳ್ಳತನ ಪ್ರಕರಣಗಳು ದಾಖಲಾಗಿದ್ದವು. ಬಂಧಿತರಿಂದ ಬರೋಬ್ಬರಿ 14 ಲಕ್ಷ ಮೌಲ್ಯದ 110 ಗ್ರಾಂ ಚಿನ್ನದ ಆಭರಣಗಳು, ನಗದು ಮತ್ತು ಕೃತ್ಯಕ್ಕೆ ಬಳಸಿದ್ದ ಉಪಕರಣಗಳನ್ನು ಜಪ್ತಿ ಮಾಡಲಾಗಿದೆ.

## ಮಕ್ಕಳ ಎದುರಲ್ಲೇ ಪತ್ನಿಯನ್ನು ಸುಟ್ಟು ಮಗಳನ್ನೂ ಬೆಂಕಿಗೆ ತಳ್ಳಿದ ಅಮಾನುಷ ತಂದೆ



**ಹೈದರಾಬಾದ್:** ಮಕ್ಕಳ ಮುಂದೆಯೇ ತಂದೆಯೊಬ್ಬ ಪತ್ನಿಗೆ ಬೆಂಕಿಹಚ್ಚಿದ್ದಲ್ಲದೆ ಅದೇ ಬೆಂಕಿಗೆ ಮಗಳನ್ನೂ ತಳ್ಳಿರುವ ಘಟನೆ ಹೈದರಾಬಾದಿನಲ್ಲಿ ನಡೆದಿದೆ. ಪತಿ ಬೆಂಕಿ ಹಚ್ಚಿದ ಪರಿಣಾಮ ಮಹಿಳೆಯೊಬ್ಬರು ಸಜೀವ ದಹನಗೊಂಡಿದ್ದಾರೆ. ಮಗಳನ್ನು ಬೆಂಕಿಗೆ ತಳ್ಳಿ ಪರಾರಿಯಾಗಿದ್ದಾನೆ. ಕ್ರಿಸ್‌ಮಸ್‌ಗೆ ಒಂದು ದಿನ ಮೊದಲು ನಗರದ ನಲ್ಲಕುಂಟಾ ಪ್ರದೇಶದಲ್ಲಿ ಈ ಭೀಕರ ಘಟನೆ ನಡೆದಿದೆ. ವೆಂಕಟೇಶ್ ತನ್ನ ಪತ್ನಿ ತ್ರಿವೇಣಿ ಮೇಲೆ ಅನುಮಾನ ವ್ಯಕ್ತಪಡಿಸುತ್ತಿದ್ದನೆಂದು ಪೊಲೀಸರು ತಿಳಿಸಿದ್ದಾರೆ.

ಮಕ್ಕಳ ಮುಂದೆಯೇ ತ್ರಿವೇಣಿ ಮೇಲೆ ಹಲ್ಲೆ ನಡೆಸಿ, ನಂತರ ಆಕೆಯ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಅವರ ಮಗಳು ತನ್ನ ತಾಯಿಯನ್ನು ಉಳಿಸಲು ಪ್ರಯತ್ನಿಸಿದಾಗ, ಆಕೆಯನ್ನೂ ಬೆಂಕಿಗೆ ತಳ್ಳಿ ಮನೆಯಿಂದ ಪರಾರಿಯಾಗಿದ್ದಾನೆ ಎಂದು ವರದಿಯಾಗಿದೆ.

ಅವರ ಕಿರುಚಾಟ ಕೇಳಿ ನೆರೆಹೊರೆಯವರು ಅವರ ಮನೆಗೆ ಓಡೋಡಿ ಬಂದಿದ್ದರು. ಆ ಹೊತ್ತಿಗೆ, ತೀವ್ರವಾದ ಸುಟ್ಟ ಗಾಯಗಳಿಂದ ತ್ರಿವೇಣಿ ಸಾವನ್ನಪ್ಪಿದ್ದರು. ಸಣ್ಣಪುಟ್ಟ ಗಾಯಗಳೊಂದಿಗೆ ಕೂದಲೆಳೆಯ ಅಂತರದಲ್ಲಿ ಪಾರಾದ ಅವರ ಮಗಳನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು.

**ವೆಂಕಟೇಶ್ ಮತ್ತು ತ್ರಿವೇಣಿ ಅವರದು ಪ್ರೇಮ ವಿವಾಹ.**

ಅವರಿಗೆ ಇಬ್ಬರು ಮಕ್ಕಳಿದ್ದಾರೆ, ಒಬ್ಬಳು ಮಗಳು ಮತ್ತು ಒಬ್ಬ ಮಗ. ವೆಂಕಟೇಶ್ ತನ್ನ ಹೆಂಡತಿಯ ಬಗ್ಗೆ ಅನುಮಾನ ಬೆಳೆಸಿಕೊಂಡು ಆಗಾಗ ಕಿರುಕುಳ ನೀಡುತ್ತಿದ್ದ ಎನ್ನಲಾಗಿದೆ. ನಿರಂತರ ಕಿರುಕುಳ ಸಹಿಸಲಾಗದೆ ತ್ರಿವೇಣಿ ಇತ್ತೀಚೆಗೆ ತನ್ನ ಹೆತ್ತವರ ಮನೆಗೆ ಹೋಗಿದ್ದಳು.

ತ್ರಿವೇಣಿ ತನ್ನ ಬಳಿಗೆ ಹಿಂತಿರುಗಿದ ನಂತರ, ವೆಂಕಟೇಶ್ ತಾನು ಬದಲಾಗುತ್ತೇನೆ ಎಂದು ಅವಳನ್ನು ಮನವೊಲಿಸಿ ಮನೆಗೆ ಕರೆದುಕೊಂಡು ಬಂದಿದ್ದ ನಂತರ ಈ ಅಪರಾಧ ನಡೆದಿದೆ ಎನ್ನಲಾಗಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಪರಾರಿಯಾಗಿರುವ ವೆಂಕಟೇಶ್ ನನ್ನು ಹಿಡಿಯಲು ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ.

ಈ ಘಟನೆಯು ಪ್ರದೇಶದಲ್ಲಿ ಆಕ್ರೋಶಕ್ಕೆ ಕಾರಣವಾಗಿದ್ದು, ಕೌಟುಂಬಿಕ ಹಿಂಸಾಚಾರ ಮತ್ತು ಪತಿ ಅಥವಾ ಪತ್ನಿ ನಡುವಿನ ಮನಸ್ತಾಪಗಳು, ಅಪನಂಬಿಕೆಯಿಂದ ನಡೆಯುವ ಅಪರಾಧಗಳ ಬಗ್ಗೆ ಕಳವಳ ವ್ಯಕ್ತವಾಗಿದೆ.

## ಹಠಕ್ಕೆ ಬಿದ್ದು ಮದುವೆಯಾಗಿದ್ದ ಯುವತಿ: ಆರೇ ತಿಂಗಳಲ್ಲಿ ಪತಿ ದಾರುಣ ಸಾವು

## ಮದುವೆಯಾದ ಕೆಲವೇ ದಿನಗಳಲ್ಲಿ ನವವಿವಾಹಿತೆಯ ನಿಗೂಢ ಸಾವು






**ನೆಲಮಂಗಲ:** ಮದುವೆಯಾಗಿ ಕೇವಲ ಒಂದು ತಿಂಗಳೂ ಪೂರೈಸುವ ಮುನ್ನವೇ ನವವಿವಾಹಿತೆ ನಿಗೂಢವಾಗಿ ಮೃತಪಟ್ಟಿರುವ ದುರ್ಘಟನೆ ನೆಲಮಂಗಲದಲ್ಲಿ ನಡೆದಿದೆ. 26 ವರ್ಷದ ಐಶ್ವರ್ಯ ಮೃತ ಯುವತಿಯಾಗಿದ್ದು, ಆಕೆಯ ಪತಿಯೇ ಈ ಸಾವಿನ ಹಿಂದೆ ಕೈವಾಡವಿದೆ ಎಂದು ಪೋಷಕರು ಗಂಭೀರ ಆರೋಪ ಮಾಡಿದ್ದಾರೆ. ಕೇವಲ 27 ದಿನಗಳ ಹಿಂದೆ ಮಾತ್ರ ಲಿಖಿತ್ ಸಿಂಹ ಅವರೊಂದಿಗೆ ಐಶ್ವರ್ಯ ವಿವಾಹವಾಗಿತ್ತು. ಸುಂದರ ಭವಿಷ್ಯ ಮತ್ತು ಸಂಸಾರದ ಕನಸು ಕಂಡು ಗೃಹಸ್ಥ ಜೀವನ ಆರಂಭಿಸಿದ್ದ ಐಶ್ವರ್ಯ, ಸಾಂಸಾರಿಕ ಬದುಕು ಸರಿಯಾಗಿ ಶುರುವಾಗುವ ಮೊದಲುವೇ ಪ್ರಾಣ ಕಳೆದುಕೊಂಡಿರುವುದು ಕುಟುಂಬಸ್ಥರನ್ನು ಆಘಾತಕ್ಕೀಡು ಮಾಡಿದೆ.

ಪತ್ನಿಗೆ ಕಿರುಕುಳ ನೀಡಿದ ಆರೋಪ

ಮೃತ ಐಶ್ವರ್ಯ ಮೂಲತಃ ನಾಗಮಂಗಲ ನಿವಾಸಿಗಳಾದ ಮಮತಾ ಮತ್ತು ಕೃಷ್ಣಮೂರ್ತಿ ದಂಪತಿಯ ಹಿರಿ ಮಗಳು. ಕುಟುಂಬಸ್ಥರ ಒಪ್ಪಿಗೆಯೊಂದಿಗೆ ಬಾಗಲಗುಂಟೆ ಪೈಪ್‌ಲೈನ್ ಮಲ್ಲಸಂದ್ರ ನಿವಾಸಿ ಲಿಖಿತ್ ಸಿಂಹ ಅವರಿಗೆ ಐಶ್ವರ್ಯಳನ್ನು ಕೊಟ್ಟು ಮದುವೆ ಮಾಡಲಾಗಿತ್ತು. ಮದುವೆ ಸಂಭ್ರಮದಿಂದಲೇ ನಡೆದಿದ್ದರೂ, ಮದುವೆಯಾದ ಕೆಲವೇ ದಿನಗಳಲ್ಲಿ ಐಶ್ವರ್ಯಗೆ ಪತಿ ಕಿರುಕುಳ ನೀಡುತ್ತಿದ್ದಾನೆ ಎಂಬ ಆರೋಪಗಳು ಕೇಳಿಬಂದಿದ್ದವು. ಈ ವಿಷಯವಾಗಿ ಕುಟುಂಬಸ್ಥರಲ್ಲಿ ಆತಂಕ ಉಂಟಾಗಿದ್ದು, ನಿನ್ನೆ ಬೆಳಿಗ್ಗೆ ಎರಡು ಕುಟುಂಬಗಳ ನಡುವೆ ರಾಜಿ ಪಂಚಾಯ್ತಿ ಕೂಡ ನಡೆದಿತ್ತು.

ಆದರೆ ರಾಜಿ ಮಾತುಕತೆ ನಡೆದ ಕೆಲವೇ ಗಂಟೆಗಳಲ್ಲಿ ಮತ್ತೆ ಐಶ್ವರ್ಯ ಮೇಲೆ ಹಲ್ಲೆ ನಡೆಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ನಿನ್ನೆ ಸಂಜೆ ವೇಳೆಗೆ ಲಿಖಿತ್ ತಮ್ಮ ಕರೆ ಮಾಡಿ ಐಶ್ವರ್ಯ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆಕೆಯ ಪೋಷಕರಿಗೆ ಮಾಹಿತಿ ನೀಡಿದ್ದಾರೆ. ಈ ಮಾಹಿತಿ ಪಡೆದು ಆತಂಕಗೊಂಡ ಪೋಷಕರು ಹಾಗೂ ಸಂಬಂಧಿಕರು ಮನೆಗೆ ಆಗಮಿಸಿ ನೋಡಿದಾಗ, ಐಶ್ವರ್ಯ ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹವಾಗಿ ಪತ್ತೆಯಾಗಿದ್ದಾರೆ. ಆದರೆ ಮನೆ ಬಾಗಿಲು ಹೊರಗಿನಿಂದ ಮುಚ್ಚಿದ್ದುದರಿಂದ ಹಾಗೂ ಹಲವು ಅನುಮಾನಾಸ್ಪದ ಅಂಶಗಳು ಕಂಡುಬಂದ ಕಾರಣ, ಇದು ಆತ್ಮಹತ್ಯೆಯಲ್ಲ, ಗಂಡನೇ ನೇಣು ಹಾಕಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಈ ಕುರಿತು ಮೃತಳ ಪೋಷಕರು ಗಂಭೀರ ಆರೋಪಗಳನ್ನು ಮುಂದಿಟ್ಟಿದ್ದಾರೆ.

ಘಟನೆ ಸಂಬಂಧ ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಐಶ್ವರ್ಯ ಪತಿ ಲಿಖಿತ್ ಸಿಂಹನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸಾವಿನ ನಿಖರ ಕಾರಣ ತಿಳಿದುಬರುವ ನಿಟ್ಟಿನಲ್ಲಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಪ್ರಕರಣದ ಕುರಿತು ಪೊಲೀಸರು ಮುಂದಿನ ತನಿಖೆ ನಡೆಸುತ್ತಿದ್ದಾರೆ.



ಚಿಕ್ಕಬಳ್ಳಾಪುರ: ಟಿಪ್ಪರ್ ಮತ್ತು ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿರುವ ದುರ್ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಅಜ್ಜವಾರ ಗ್ರಾಮದ ಗೇಟ್ ಬಳಿ ನಡೆದಿದೆ. ರಾಜ್ಯ ಸರ್ಕಾರ ಮೃತರ ಕುಟುಂಬಗಳಿಗೆ ಪರಿಹಾರ ಘೋಷಣೆ ಮಾಡಿದೆ.

ಅಪಘಾತವು ನಿನ್ನೆ ತಡರಾತ್ರಿ ಸಂಭವಿಸಿದ್ದು, ಅತಿವೇಗವಾಗಿ ಬಂದ ಟಿಪ್ಪರ್ ವಾಹನವು ಎದುರಿನಿಂದ ಬಂದ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಬೈಕ್ ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತರೆಲ್ಲರೂ ಅಜ್ಜವಾರ ಗ್ರಾಮದ ನಿವಾಸಿಗಳಾಗಿದ್ದು, ಒಂದೇ ಬೈಕ್‌ನಲ್ಲಿ ನಾಲ್ವರು ಪ್ರಯಾಣಿಸುತ್ತಿದ್ದರು. ಘಟನೆಯ ಮಾಹಿತಿ ತಿಳಿದ ಕೂಡಲೇ ಚಿಕ್ಕಬಳ್ಳಾಪುರ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಈ ದುರ್ಘಟನೆಯ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ. ಈ ಕುರಿತು ತಮ್ಮ ಸಾಮಾಜಿಕ ಜಾಲತಾಣ 'ಎಕ್ಸ್' ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಿಎಂ, "ಚಿಕ್ಕಬಳ್ಳಾಪುರ ನಗರದ ಹೊರವಲಯದ ಅಜ್ಜವಾರ ರಸ್ತೆಯಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ನಾಲ್ವರು ಯುವಕರು ಸಾವಿಗೀಡಾದ ವಿಚಾರ ತಿಳಿದು ಅತೀವ ದುಃಖವಾಯಿತು. ಮೃತರ ಆತ್ಮಕ್ಕೆ ಶಾಂತಿ ಸಿಗಲಿ. ಕ್ರಿಸ್ಮಸ್ ಸಂಭ್ರಮದಲ್ಲಿದ್ದ ಕುಟುಂಬಗಳು ಇಂದು ಸೂತಕದ ಮನೆಗಳಾಗಿ ಮಾರ್ಪಟ್ಟಿರುವುದು ಅತ್ಯಂತ ದುರದೃಷ್ಟಕರ. ಕುಟುಂಬದ ಆಧಾರವಾಗಿದ್ದ ಈ ಯುವಕರ ನಿಧನದಿಂದ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಪರಿಹಾರ ನೀಡಲಾಗುವುದು" ಎಂದು ತಿಳಿಸಿದ್ದಾರೆ.



ಇನ್ನೊಂದೆಡೆ, ಚಿಕ್ಕಬಳ್ಳಾಪುರ ಸಂಸದ ಡಾ. ಕೆ. ಸುಧಾಕರ್ ಅವರು ಅಜ್ಜವಾರ ಗ್ರಾಮಕ್ಕೆ ಭೇಟಿ ನೀಡಿ ಮೃತ ಯುವಕರ ಅಂತಿಮ ದರ್ಶನ ಪಡೆದಿದ್ದಾರೆ. ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಅವರು, ವೈಯಕ್ತಿಕವಾಗಿ ತಲಾ 50 ಸಾವಿರ ರೂ. ಪರಿಹಾರ ನೀಡುವುದಾಗಿ ಘೋಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಸುಧಾಕರ್, "ಇದು ಅತ್ಯಂತ ಆಘಾತಕಾರಿ ಘಟನೆ. ಒಂದೇ ಕುಟುಂಬದ ಅಣ್ಣ-ತಮ್ಮಂದಿರಿಬ್ಬರೂ ಈ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ತಾಯಿಗೆ ಆಧಾರವಾಗಿದ್ದ ಗಂಡು ಮಕ್ಕಳು ಒಂದೇ ಕ್ಷಣದಲ್ಲಿ ಕಳೆದುಹೋದರೆ ಆಕೆಯ ಸ್ಥಿತಿ ಊಹಿಸಲು ಕೂಡ ಸಾಧ್ಯವಿಲ್ಲ. ಇಂತಹ ನೋವು ಯಾವ ತಾಯಿಗೂ ಬರಬಾರದು" ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಪರಿಹಾರ ಘೋಷಿಸಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಭಿನಂದನೆ ಸಲ್ಲಿಸಿದ ಅವರು, ಕೇಂದ್ರ ಸರ್ಕಾರ ಹಾಗೂ ಪ್ರಧಾನಿಗಳಿಗೂ ಮೃತ ಕುಟುಂಬಗಳಿಗೆ ಹೆಚ್ಚುವರಿ ಪರಿಹಾರ ನೀಡುವಂತೆ ಮನವಿ ಮಾಡಿಕೊಂಡಿರುವುದಾಗಿ ತಿಳಿಸಿದರು.

## ಹನುಮಂತನಿಗೆ ಪೂಜೆ ಮಾಡಲು ಕಿತ್ತಾಟ: 3 ಕೇಸ್ ಬುಕ್



**ಕೊಪ್ಪಳ:** ಜಿಲ್ಲೆಯ ಗಂಗಾವತಿ ತಾಲೂಕಿನ ಅಂಜನಾದ್ರಿ ಪರ್ವತ ಅದು ಹನುಮ ಹುಟ್ಟಿದ ಸ್ಥಳ. ಈ ಕ್ಷೇತ್ರಕ್ಕೆ ದೇಶ-ವಿದೇಶದಿಂದ ಭಕ್ತರು ಬರುತ್ತಾರೆ. 575 ಮೆಟ್ಟಿಲೇರಿ ಹನುಮನ ದರ್ಶನ ಪಡೆದು ಪುನೀತರಾಗುತ್ತಾರೆ. ಇದೇ ಹನುಮ ಹುಟ್ಟಿದ ನಾಡು ಇದೀಗ ವಿವಾದದ ಕೇಂದ್ರ ಬಿಂದುವಾಗಿದೆ. ಸ್ವಾಮೀಜಿಗಳಿಬ್ಬರು ಗರ್ಭಗುಡಿಯಲ್ಲಿಯೇ ಜಗಳ ಮಾಡಿಕೊಂಡಿದ್ದಾರೆ. ಖಾವಿಧಾರಿಗಳು ಬಾಯಲ್ಲಿ ಕೀಳುಮಟ್ಟದ ಪದ ಪ್ರಯೋಗವಾಗಿದೆ. ಸದ್ಯ ಪ್ರಕರಣ ಗಂಭೀರವಾಗಿದ್ದು, ಎರಡು ದಿನದ ಅವಧಿಯಲ್ಲಿ ಮೂರು ಕೇಸ್ ದಾಖಲಾಗಿವೆ.

**ಕೈಕೈ ಮಿಲಾಯಿಸುವ ಹಂತಕ್ಕೆ ಹೋದ ಅರ್ಚಕರ ಗಲಾಟೆ**

ಈ ಅಂಜನಾದ್ರಿ ಪರ್ವತದಲ್ಲಿ ಹನುಮ ಹುಟ್ಟಿದ ಎನ್ನುವ ಪ್ರತೀತಿ ಇದೆ. ಈ ಕ್ಷೇತ್ರಕ್ಕೆ ದೇಶ ವಿದೇಶಗಳಿಂದ ಭಕ್ತರು ಬರುತ್ತಾರೆ. ಇದೇ ಅಂಜನಾದ್ರಿ ಕಳೆದ ನಾಲ್ಕು ದಿನಗಳಿಂದ ಸಾಕಷ್ಟು ಸುದ್ದಿಯಲ್ಲಿದೆ. ಅದಕ್ಕೆ ಕಾರಣ ಸ್ವಾಮೀಜಿಗಳಿಬ್ಬರ ನಡುವಿನ ಗಲಾಟೆ. ಕಳೆದ ನಾಲ್ಕು ದಿನಗಳ ಹಿಂದೆ ಹನುನ ಹುಟ್ಟಿದ ಜಾಗದಲ್ಲಿ ಅರ್ಚಕ ಮಾಹಂತ ವಿದ್ಯಾದಾಸ್ ಬಾಬಾ ಹಾಗೂ ಹಂಪಿಯ ಗೋವಿಂದಾನಂದ ಸರಸ್ವತಿ ಮಧ್ಯೆ ಪೂಜಾ ವಿಚಾರಕ್ಕೆ ಗಲಾಟೆಯಾಗಿತ್ತು. ಮಾತಿಗೆ ಮಾತು ಬೆಳದಿತ್ತು. ಒಂದು ಹಂತಕ್ಕೆ ಕೈಕೈ ಮಿಲಾಯಿಸುವ ಹಂತಕ್ಕೂ ಹೋಗಿತ್ತು.

ಯಾವಾಗ ಅಂಜನಾದ್ರಿಯಲ್ಲಿ ಗಲಾಟೆಯಾಯಿತೋ ಗೋವಿಂದಾನಂದ ಸರಸ್ವತಿ ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಗೆ ವಿದ್ಯಾದಾಸ್ ಬಾಬಾ ಸೇರಿ 10 ಜನರ ವಿರುದ್ಧ ದೂರು ನೀಡಿದ್ದರು. ಇತ್ತ ವಿದ್ಯಾದಾಸ್ ಬಾಬಾ ಕೂಡ ಆನಲೈನ್‌ನಲ್ಲಿ ದೂರು ದಾಖಲಿಸಿದ್ದರು. ಆದರೆ ಅದು ಅಧಿಕೃತವಾಗಿಲ್ಲ, ಈ ಮಧ್ಯೆ ಮರುದಿನ ಮತ್ತೆ ಪಂಚನಾಮೆಗೆ ಬಂದಾಗ ವಿದ್ಯಾದಾಸ್ ಬಾಬಾ ಬೆಂಬಲಿಗರು, ಗೋವಿಂದಾನಂದ ಸರಸ್ವತಿ ಮೇಲೆ ಹಲ್ಲೆ ಮಾಡಿದ್ದಾರೆ. ತಲೆಗೆ ಹೊಡೆದು ಕಬ್ಬಿಣದ ಪೈಪ್‌ನಿಂದ ಹಲ್ಲೆಗೆ ಮುಂದಾಗಿದ್ದರು. ಈ ವಿಡಿಯೋ ವೈರಲ್ ಆಗುತ್ತಿದ್ದಂತೆ, ಗಂಗಾವತಿ ಗ್ರಾಮೀಣ ಪೊಲೀಸರು ಹಲ್ಲೆಗೆ ಮುಂದಾಗಿದ್ದ ಐವರನ್ನು ಅರೆಸ್ಟ್ ಮಾಡಿದ್ದಾರೆ. ವಿದ್ಯಾದಾಸ್ ಬಾಬಾ ವಿರುದ್ಧ ಗೋವಿಂದಾನಂದ ಸರಸ್ವತಿ ಗ್ರಾಮೀಣ ಠಾಣೆಯಲ್ಲಿ ಮತ್ತೊಂದು ದೂರು ದಾಖಲು ಮಾಡಿದ್ದಾರೆ.

**ಅರ್ಚಕ ವಿದ್ಯಾದಾಸ್ ಬಾಬಾ ವಿರುದ್ಧ ಮೂರು ಕೇಸ್**

ಇನ್ನು ಪಂಚನಾಮೆಗೆ ಹೋದ ಸಂದರ್ಭದಲ್ಲಿ ಪೊಲೀಸರ ಕರ್ತವ್ಯಕ್ಕೆ ಅಡ್ಡಿ ಮಾಡಿದ ಆರೋಪದಡಿ ಪೊಲೀಸರು ವಿದ್ಯಾದಾಸ್ ಬಾಬಾ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲು ಮಾಡಿದ್ದಾರೆ. ಎರಡು ದಿನದ ಅವಧಿಯಲ್ಲಿ ಒಟ್ಟು ಮೂರು ಕೇಸ್ ದಾಖಲಾಗಿವೆ. ಅರ್ಚಕ ವಿದ್ಯಾದಾಸ್ ಬಾಬಾ ವಿರುದ್ಧ ಮೂರು ಕೇಸ್ ದಾಖಲಾಗಿವೆ.

ಇನ್ನು ಅರ್ಚಕ ಮಹಾಂತ ವಿದ್ಯಾದಾಸ್ ಬಾಬಾ ವಿರುದ್ಧ ಎರಡು ದಿನದ ಅವಧಿಯಲ್ಲಿ ಮೂರು ಕೇಸ್ ದಾಖಲಾಗಿದ್ದು, ಪೊಲೀಸರ ನಡೆ ಮೇಲೆ ಅನುಮಾನ ಮೂಡಿದೆ. ಇದುವರೆಗೂ ಅರ್ಚಕ ವಿದ್ಯಾದಾಸ್ ಬಾಬಾ ನೀಡಿದ ದೂರು ದಾಖಲಾಗಿಲ್ಲ, ಆದರೆ ಅಂದು ಗೋವಿಂದಾನಂದ ಸರಸ್ವತಿ ನೀಡಿದ ದೂರು ದಾಖಲಾಗಿದೆ. ಹೀಗಾಗಿ ಈ ಪ್ರಕರಣದ ಹಿಂದೆ ಏನೋ ಇದೆ ಅನ್ನೋ ಪ್ರಶ್ನೆ ಹುಟ್ಟಿಕೊಂಡಿದೆ. ಇನ್ನು ಅದಕ್ಕೆ ಕೋರ್ಟ್ ಕೇಸ್‌ವೊಂದು ಕಾರಣವಾಯಿತಾ ಎನ್ನುವ ಅನುಮಾನವು ವ್ಯಕ್ತವಾಗುತ್ತಿದೆ.

ಕಳೆದ 2018ರಿಂದ ಅರ್ಚಕ ವಿಚಾರವಾಗಿ ಜಿಲ್ಲಾಡಳಿತ ಹಾಗೂ ವಿದ್ಯಾದಾಸ್ ಬಾಬಾ ನಡುವೆ ವ್ಯಾಜ್ಯ ಇದೆ. ಧಾರವಾಡ ಹೈಕೋರ್ಟ್‌ನಲ್ಲಿ ಕೇಸ್ ನಡೆಯುತ್ತಿದೆ. ಇದೀಗ ಆ ಕೇಸ್ ಅಂತಿಮ ಹಂತಕ್ಕೆ ಬಂದು ನಿಂತಿದೆ. ಇನ್ನೇನು ಕೆಲವೇ ದಿನಗಳಲ್ಲಿ ಅಂಜನಾದ್ರಿಯಲ್ಲಿ ಯಾರು ಪೂಜೆ ಮಾಡಬೇಕು ಎನ್ನುವುದು ಇತ್ಯರ್ಥವಾಗಲಿದೆ. ಆದರೆ, ಮುಂಚೆ ಈ ಘಟನೆಗಳು ನಡೆದಿರುವುದು ಹಲವು ಅನುಮಾನಕ್ಕೆ ಕಾರಣವಾಗಿದೆ. ಬೇಕು ಅಂತಲೇ ಕಾಣದ ಕೈಗಳು ವಿವಾದ ಸೃಷ್ಟಿ ಮಾಡತಿದೆಯಾ ಅನ್ನೋ ಅನುಮಾನ ಇದೆ. ಇದೇ ಗೋಂವಿದಾನಂದ ಸರಸ್ವತಿ ಕಿಷ್ಕಿಂಧಾ ಪ್ರದೇಶದಲ್ಲಿ ಬೃಹತ್ ಆಂಜನೇಯನ ಮೂರ್ತಿ ಸ್ಥಾಪನೆ ಮಾಡುವುದಾಗಿ ಹೇಳಿಕೊಂಡು ಓಡಾಡಿದ್ದಾರೆ. ಇಷ್ಟು ದಿನ ಬರಲಾರದ ಗೋವಿಂದಾನಂದ ಸರಸ್ವತಿ ಶ್ರೀ ದಿಢೀರ್ ಪ್ರತ್ಯಕ್ಷವಾಗಿದ್ದು ಏಕೆ ಅನ್ನೋ ಅನುಮಾನ ಹುಟ್ಟಿಕೊಂಡಿದೆ.

ಒಟ್ಟಾರೆ ಅಂಜನಾದ್ರಿಯಲ್ಲಿ ತೀರ್ಪು ಬರುವ ಕೆಲವೇ ದಿನಗಳ ಮುಂಚೆ ವಿವಾದ ಸೃಷ್ಟಿಯಾಗಿದ್ದು, ಹಲವು ಅನುಮಾನಕ್ಕೆ ಕಾರಣವಾಗಿದೆ. ಜಿಲ್ಲಾಡಳಿತ ಇದುವರೆಗೂ ಅಂಜನಾದ್ರಿ ವಿಚಾರವಾಗಿ ಯಾವುದೇ ಮಾಹಿತಿ ನೀಡಿಲ್ಲ. ಮೂರು ಕೇಸ್ ದಾಖಲಾದ ಹಿನ್ನಲೆ ಅರ್ಚಕ ವಿದ್ಯಾದಾಸ್ ಬಾಬಾ ಸದ್ಯ ಅಂಜನಾದ್ರಿಯನ್ನು ತೊರೆದಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸ್ವಂತ ಖರ್ಚಿನಲ್ಲಿ ತಮ್ಮ ಶಾಲೆಯ ಎಲ್ಲಾ ಮಕ್ಕಳಿಗೆ ಪ್ರವಾಸ ಭಾಗ್ಯ ಕಲ್ಪಿಸಿದ ಮುಖ್ಯ ಶಿಕ್ಷಕ ರಾಜು ಬಿ ಎಸ್,



**ತಾಲ್ಲೂಕಿನ ತೆಂಡೇಕೆರೆ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಬಿ.ಎಸ್. ರಾಜು ಅವರು ತಮ್ಮ ಒಂದು ತಿಂಗಳ ವೇತನದಲ್ಲಿ(ಸುಮಾರು 1ಲಕ್ಷ ರೂ) ಶಾಲೆಯ ಎಲ್ಲಾ 65 ವಿದ್ಯಾರ್ಥಿಗಳಿಗೂ ಎರಡು ದಿನಗಳ ಶೈಕ್ಷಣಿಕ ಪ್ರವಾಸ ಭಾಗ್ಯ ಕಲ್ಪಿಸುವ ಮೂಲಕ ಮಾದರಿ ಶಿಕ್ಷಕರಾಗಿ ಹೊರ ಹೊಮ್ಮಿದ್ದಾರೆ.**

ಸರ್ಕಾರಿ ಶಾಲೆಗಳು ಮಕ್ಕಳ ದಾಖಲಾತಿ ಇಲ್ಲದೆ ಮುಚ್ಚುತ್ತಿರುವ ಈ ಸಂದರ್ಭದಲ್ಲಿ ಕಳೆದ ನಾಲ್ಕು ವರ್ಷಗಳಿಂದ ಮಕ್ಕಳ ದಾಖಲಾತಿ ಹೆಚ್ಚಿಸಲು ಮನೆ ಮನೆ ಭೇಟಿ ಕಾರ್ಯಕ್ರಮ ಹಮ್ಮಿಕೊಂಡು ಮಕ್ಕಳ ಪೋಷಕರಲ್ಲಿ ಸರ್ಕಾರಿ ಶಾಲೆಯ ಬಗ್ಗೆ ಜಾಗೃತಿ ಮೂಡಿಸಿ ದಾಖಲಾತಿಯನ್ನು ಹೆಚ್ಚಿಸುವಲ್ಲಿ ಶ್ರಮಸಿದ್ದ ಮುಖ್ಯ ಶಿಕ್ಷಕ ಬಿ.ಎಸ್.ರಾಜು ಅವರು ಬಡಮಕ್ಕಳು ಉತ್ತಮ ಶಿಕ್ಷಣ ಪಡೆಯಬೇಕು ಎಂಬ ಮಹಾದಾಸೆಯನ್ನು ಹೊಂದಿದ್ದು ಸ್ವತಃ ಇಂಗ್ಲೀಷ್ ಶಿಕ್ಷಕರಾಗಿ ಇಂಗ್ಲೀಷ್ ಅನ್ನು ಮಕ್ಕಳಿಗೆ ಕಲಿಸಿಕೊಡುವ ಮೂಲಕ "ಗ್ರಾಮೀಣ ಮಕ್ಕಳಿಗೆ ಇಂಗ್ಲೀಷ್ ಕಬ್ಬಿಣದ ಕಡಲೆ" ಎನ್ನುವ ಮಾತನ್ನು ದೂರವಾಗಿಸಿದ್ದಾರೆ. ಪೋಷಕರು ತಮ್ಮ ಮಕ್ಕಳು ಇಂಗ್ಲೀಷ್ ಕಲಿಕೆಯಲ್ಲಿ ಮುಂದಿರುವುದನ್ನು ಮನಗಂಡು ಇತರೆ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಯಿಂದ ಕರೆತಂದು ಸರ್ಕಾರಿ ಶಾಲೆಗೆ ಸೇರಿಸುತ್ತಿದ್ದಾರೆ. ಇದಕ್ಕೆ ಶಾಲೆಯ ಸಹ ಶಿಕ್ಷಕರ ಸಹಕಾರದಿಂದ ವರ್ಷದಿಂದ ವರ್ಷಕ್ಕೆ ದಾಖಲಾತಿ ಪ್ರಮಾಣ ಹೆಚ್ಚಿಸಲು ಮುಖ್ಯ ಶಿಕ್ಷಕ ಬಿ.ಎಸ್. ರಾಜು ಅವರು ಅಪಾರವಾಗಿ ಶ್ರಮಿಸುತ್ತಿದ್ದಾರೆ. ತೆಂಡೇಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೇ.80ಕ್ಕಿಂತ ಹೆಚ್ಚು ಬಡವರು ಮತ್ತು ಕೂಲಿ ಕಾರ್ಮಿಕರ ಮಕ್ಕಳು ಓದುತ್ತಿದ್ದಾರೆ. ಪ್ರಸ್ತುತ 65ಮಕ್ಕಳು ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಬಿ.ಎಸ್.ರಾಜು ಅವರು ಶಾಲೆಗೆ ಕಳೆದ 4ವರ್ಷಗಳ ಹಿಂದೆ ವರ್ಗಾವಣೆಯಾಗಿ ಬಂದ ನಂತರ ಪ್ರತಿ ವರ್ಷವೂ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಲು ಪೋಷಕರ ಸಹಕಾರ, ಎಸ್.ಡಿ.ಎಂ.ಸಿ ಪದಾಧಿಕಾರಿಗಳ ಸಹಕಾರ, ಹಳೆಯ ವಿದ್ಯಾರ್ಥಿಗಳ ಸಹಕಾರ, ದಾನಿಗಳ ಸಹಕಾರದಿಂದ ಶ್ರಮಿಸುತ್ತಿದ್ದಾರೆ. ಈ ಸಾಲಿನಲ್ಲಿ ಶೈಕ್ಷಣಿಕ ಪ್ರವಾಸ ಹೋಗಬೇಕೆಂದು ಯೋಜನೆ ರೂಪಿಸಿದಾಗ ಶೇ.30ರಷ್ಟು ಮಕ್ಕಳು ಮಾತ್ರ ಪ್ರವಾಸ ಶುಲ್ಕ ನೀಡಲು ಮುಂದೆ ಬಂದರು. ಉಳಿದ ಶೇ.70ರಷ್ಟು ಮಕ್ಕಳ ಪೋಷಕರು ಕೂಲಿ ಮಾಡಿ ಜೀವನ ನಡೆಸುವ ಕಾರಣ ಪ್ರವಾಸ ಶುಲ್ಕ ನೀಡಲು ಮುಂದೆ ಬರಲಿಲ್ಲ. ಇದನ್ನು ಮನಗಂಡ ಮುಖ್ಯ ಶಿಕ್ಷಕರಾದ ಎಲ್ಲಾ ಮಕ್ಕಳಿಗೂ ಉಚಿತವಾಗಿ ಪ್ರವಾಸ ಭಾಗ್ಯ ಕಲ್ಪಿಸಬೇಕು ಎಂದು ತಮ್ಮ ಒಂದು ತಿಂಗಳ ವೇತನವನ್ನು ಖರ್ಚು ಮಾಡಿ ಕೆ.ಎಸ್.ಆರ್.ಟಿ.ಸಿ ಬಸ್ ವ್ಯವಸ್ಥೆ, ಮಕ್ಕಳಿಗೆ ಊಟ ತಿಂಡಿ ವ್ಯವಸ್ಥೆ, ಮಲೆ ಮಹದೇಶ್ವರ ಬೆಟ್ಟದಲ್ಲಿ ಒಂದು ದಿನ ತಂಗಲು ಸಮುದಾಯ ಭವನದ ವ್ಯವಸ್ಥೆಯ ಎಲ್ಲಾ ಖರ್ಚುಗಳನ್ನು ತಾವೇ ಭರಿಸುವ ಮೂಲಕ ಎಲ್ಲಾ 65ಮಕ್ಕಳಿಗೆ, ಶಾಲಾ ಶಿಕ್ಷಕರಿಗೆ, ಅಡುಗೆಯವರಿಗೆ ಶೈಕ್ಷಣಿಕ ಪ್ರವಾಸ ಭಾಗ್ಯವನ್ನು ಕಲ್ಪಿಸುವ ಮೂಲಕ ಮಾದರಿ ಶಿಕ್ಷಕರಾಗಿ ಹೊರ ಹೊಮ್ಮಿದ್ದಾರೆ ಇಂತಹ ಉದಾರ ಗುಣವುಳ್ಳ ಶಿಕ್ಷಕರು ಎಲ್ಲಾ ಶಾಲೆಗಳಲ್ಲಿ ಇದ್ದರೆ ಸರ್ಕಾರಿ ಶಾಲೆಗಳು ಅಭಿವೃದ್ಧಿ ಸಾಧಿಸುವುದರಲ್ಲಿ ಸಂದೇಹವೇ ಇಲ್ಲ ಎಂದು ಶಾಲೆಯ ಪೋಷಕರು ಅಭಿಪ್ರಾಯಪಟ್ಟಿದ್ದಾರೆ.

ಮಕ್ಕಳ ಈ ಶೈಕ್ಷಣಿಕ ಪ್ರವಾಸದೊಂದಿಗೆ ಮುಖ್ಯ ಶಿಕ್ಷಕ ಬಿ.ಎಸ್.ರಾಜು, ಸಹ ಶಿಕ್ಷಕರಾದ ಎಸ್. ಕೆ.ಚಂದ್ರಶೇಖರ್, ರಾಮಚಂದ್ರು, ವಿ.ಎಂ.ಮಮತಾ, ಕೆ.ಸುನಂದ ಅವರುಗಳು ಕೆ.ಆರ್.ಪೇಟೆ ಡಿಪೋ ಐರಾವತ ಬಸ್ಸಿನಲ್ಲಿ ಬಸ್ಸಿನ ಸಾರಥಿ ಬೋಳಮಾರನಹಳ್ಳಿ ಕೊಪ್ಪಲು ಆನಂದ್ ಅವರೊಂದಿಗೆ ಪ್ರವಾಸಕ್ಕೆ ತೆರಳಿದ್ದು ತಲಕಾಡು, ಮಹಾದೇಶ್ವರಬೆಟ್ಟ, ಶಿವನಸಮುದ್ರ ಪಾಲ್ಸ್, ಮೇಕೆದಾಟು ಪಾಲ್ಸ್, ಹೊಗೆನಕಲ್ ಪಾಲ್ಸ್, ಸುತ್ತೂರು ಶ್ರೀ ಕ್ಷೇತ್ರ, ಚಾಮುಂಡಿಬೆಟ್ಟ, ಮೈಸೂರು ಅರಮನೆ, ಪ್ರಾಣಿಸಂಗ್ರಹಾಲಯ, ವಸ್ತು ಸಂಗ್ರಹಾಲಯ, ಕೆ.ಆರ್.ಎಸ್ ಮತ್ತಿತರ ಸ್ಥಳಗಳಿಗೆ ಮಕ್ಕಳು ಎರಡದು ದಿನಗಳ ಪ್ರವಾಸ ಕೈಗೊಂಡಿದ್ದು ಪ್ರವಾಸವು ಯಶಸ್ವಿಯಾಗಲಿ ಎಂದು ನೂರಾರು ಪೋಷಕರು ಹಾಜರಿದ್ದು ಮಕ್ಕಳಿಗೆ ಶುಭ ಹಾರೈಸಿದರು.

## ಮೊಟ್ಟೆಯಲ್ಲಿ ಕ್ಯಾನ್ಸರ್‌ಕಾರಕ ಅಂಶಗಳಿಲ್ಲ: ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ



**ಬೆಂಗಳೂರು:** ಇತ್ತೀಚಿನ ದಿನಗಳಲ್ಲಿ ಮೊಟ್ಟೆ ಸೇವನೆಯ ಕುರಿತು ಸಾರ್ವಜನಿಕರಲ್ಲಿ ಮೂಡಿದ್ದ ಆತಂಕಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ ನೀಡಿದ್ದಾರೆ. ಮೊಟ್ಟೆಯಲ್ಲಿ ಕ್ಯಾನ್ಸರ್‌ಕಾರಕ ಅಂಶಗಳಿವೆ ಎಂಬ ವದಂತಿಗಳು ಸಂಪೂರ್ಣವಾಗಿ ಸುಳ್ಳು ಎಂದು ಅವರು ಹೇಳಿಕೆ ನೀಡಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಂಗ್ರಹಿಸಿದ ಮೊಟ್ಟೆಗಳನ್ನು ಲ್ಯಾಬ್ ಪರೀಕ್ಷೆಗೆ ಒಳಪಡಿಸಲಾಗಿದ್ದು, ವರದಿ ಪ್ರಕಾರ ಮೊಟ್ಟೆ ಸಂಪೂರ್ಣ ಸುರಕ್ಷಿತವಾಗಿದ್ದು, ಯಾವುದೇ ಕ್ಯಾನ್ಸರ್‌ಕಾರಕ ಅಂಶಗಳು ಪತ್ತೆಯಾಗಿಲ್ಲ ಎಂದು ತಿಳಿಸಿದ್ದಾರೆ.

ಜಿಲ್ಲಾ ಪ್ರವಾಸದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, "ಮೊಟ್ಟೆಯಲ್ಲಿ ಅಪಾಯಕಾರಿ ಅಂಶಗಳಿವೆ ಎಂಬ ಸುದ್ದಿ ಹರಿದಾಡುತ್ತಿದ್ದ ಹಿನ್ನೆಲೆಯಲ್ಲಿ ಸರ್ಕಾರ ಗಂಭೀರವಾಗಿ ಕ್ರಮ ಕೈಗೊಂಡಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಮಾದರಿಗಳನ್ನು ಸಂಗ್ರಹಿಸಿ ಲ್ಯಾಬ್‌ಗೆ ರವಾನೆ ಮಾಡಲಾಗಿತ್ತು. ಇದೀಗ ವರದಿ ಬಂದಿದ್ದು, ಮೊಟ್ಟೆಯಲ್ಲಿ ಯಾವುದೇ ರೀತಿಯ ಕ್ಯಾನ್ಸರ್‌ಕಾರಕ ಅಂಶಗಳು ಇಲ್ಲ ಎಂಬುದು ಸ್ಪಷ್ಟವಾಗಿದೆ. ಮೊಟ್ಟೆ ಸೇವನೆ ಸಂಪೂರ್ಣವಾಗಿ ಸುರಕ್ಷಿತ" ಎಂದು ಹೇಳಿದರು.

ಮೊಟ್ಟೆ ಸೇವನೆ ಕುರಿತು ಜನರಲ್ಲಿ ಭಯ ಮೂಡಿಸುವ ರೀತಿಯಲ್ಲಿ ಸುಳ್ಳು ಮಾಹಿತಿಯನ್ನು ಹರಡಲಾಗುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು. "ಎಫ್ಎಸ್ಎಸ್ಎಐ (FSSAI) ಸಂಸ್ಥೆಯೂ ಸಹ ಮೊಟ್ಟೆ ಸುರಕ್ಷಿತವೆಂದು ದೃಢಪಡಿಸಿದೆ. ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕಪಡುವ ಅಗತ್ಯವಿಲ್ಲ. ಮೊಟ್ಟೆಯನ್ನು ನಿರ್ಬಂಧವಿಲ್ಲದೆ ಸೇವಿಸಬಹುದು" ಎಂದು ದಿನೇಶ್ ಗುಂಡೂರಾವ್ ಭರವಸೆ ನೀಡಿದರು.

ಮೊಟ್ಟೆ ಪ್ರೋಟೀನ್ ಸಮೃದ್ಧ ಆಹಾರವಾಗಿದ್ದು, ಮಕ್ಕಳಿಂದ ಹಿಡಿದು ವೃದ್ಧರವರೆಗೂ ಆರೋಗ್ಯಕ್ಕೆ ಬಹುಮುಖ್ಯ ಎಂದು ಅವರು ಹೇಳಿದರು. ಅನಗತ್ಯ ವದಂತಿಗಳಿಂದ ಜನರು ಪೌಷ್ಟಿಕ ಆಹಾರವನ್ನು ದೂರವಿಡುವುದು ಆರೋಗ್ಯದ ದೃಷ್ಟಿಯಿಂದ ಅಪಾಯಕಾರಿ ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಸೇವೆ ಕಡಿತಗೊಳಿಸುವ ವಿಚಾರದ ಕುರಿತೂ ಸಚಿವರು ಸ್ಪಷ್ಟನೆ ನೀಡಿದರು. "ಕೆಲವು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳ ಸಂಖ್ಯೆ ಕಡಿಮೆಯಿದೆ. ಅಂತಹ ಕೇಂದ್ರಗಳಲ್ಲಿ ಸ್ಪೆಷಲಿಸ್ಟ್ ವೈದ್ಯರನ್ನು ತಾತ್ಕಾಲಿಕವಾಗಿ ಶಿಫ್ಟ್ ಮಾಡಲಾಗುತ್ತದೆ. ಆದರೆ ಯಾವುದೇ ಸಮುದಾಯ ಆರೋಗ್ಯ ಕೇಂದ್ರವನ್ನು ಮುಚ್ಚುವುದಿಲ್ಲ" ಎಂದು ಅವರು ತಿಳಿಸಿದರು.

ಸ್ಪೆಷಲಿಸ್ಟ್ ವೈದ್ಯರನ್ನು ಶಿಫ್ಟ್ ಮಾಡಿದ ಬಳಿಕ, ಆ ಕೇಂದ್ರಗಳಲ್ಲಿ ಇಬ್ಬರು ಎಂಬಿಬಿಎಸ್ ವೈದ್ಯರನ್ನು ನಿಯೋಜಿಸಲಾಗುವುದು. ಇದರಿಂದ ಸ್ಥಳೀಯ ಜನರಿಗೆ 24 ಗಂಟೆಗಳ ವೈದ್ಯಕೀಯ ಸೇವೆ ಮುಂದುವರಿಯಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು. "ಸಮುದಾಯ ಆರೋಗ್ಯ ಕೇಂದ್ರಗಳು ನಿರಂತರವಾಗಿ ಕಾರ್ಯನಿರ್ವಹಿಸುತ್ತವೆ. ಜನಸಾಮಾನ್ಯರಿಗೆ ಯಾವುದೇ ತೊಂದರೆ ಆಗದಂತೆ ಸರ್ಕಾರ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಿದೆ" ಎಂದು ಅವರು ಹೇಳಿದರು.

## ನೀರು ಎಂದು ಭಾವಿಸಿ ಥಿನ್ನರ್ ಕುಡಿದು 3 ವರ್ಷದ ಕಂದಮ್ಮ ಸಾ*ವು



**ಕೋಲಾರ:** ಆಟವಾಡುತ್ತಾ ಮನೆಯೊಳಗೆ ಸಂಚರಿಸುತ್ತಿದ್ದ ಪುಟ್ಟ ಕಂದಮ್ಮವೊಂದು, ಕುಡಿಯುವ ನೀರು ಎಂದು ತಪ್ಪಾಗಿ ಭಾವಿಸಿ ಪೇಂಟ್ ಕೆಲಸಕ್ಕೆ ಬಳಸುವ ಅಪಾಯಕಾರಿ ರಾಸಾಯನಿಕವಾದ ಥಿನ್ನರ್ ಕುಡಿದು ಪ್ರಾಣ ಕಳೆದುಕೊಂಡಿರುವ ಹೃದಯವಿದ್ರಾವಕ ಘಟನೆ ಕೋಲಾರ ಜಿಲ್ಲೆಯಲ್ಲಿ ನಡೆದಿದೆ. ಈ ದುರ್ಘಟನೆ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಪೂಜಾರಹಳ್ಳಿ ಗ್ರಾಮದಲ್ಲಿ ನಡೆದಿದ್ದು, ಮೃತಪಟ್ಟ ಬಾಲಕಿಯನ್ನು ಮೂರು ವರ್ಷದ ಜಾನ್ವಿ ಅಲಿಯಾಸ್ ಜಾನು ಎಂದು ಗುರುತಿಸಲಾಗಿದೆ.

ಮನೆಯೊಳಗೆ ನಡೆಯುತ್ತಿದ್ದ ಪೇಂಟ್ ಕೆಲಸಕ್ಕಾಗಿ ತಂದಿಟ್ಟಿದ್ದ ಥಿನ್ನರ್ ಅನ್ನು ಬಾಟಲಿಯಲ್ಲಿ ತುಂಬಿ ಇಡಲಾಗಿತ್ತು. ಅದೇ ಸಮಯದಲ್ಲಿ ಆಟವಾಡುತ್ತಾ ಬಂದ ಜಾನು, ಅದನ್ನು ಕುಡಿಯುವ ನೀರು ಎಂದು ಭಾವಿಸಿ ಅರಿವಿಲ್ಲದೆ ಥಿನ್ನರ್ ಕುಡಿದಿದ್ದಾಳೆ. ಅಪಾಯಕಾರಿ ರಾಸಾಯನಿಕವನ್ನು ಕುಡಿದ ಕೆಲವೇ ಕ್ಷಣಗಳಲ್ಲಿ ಬಾಲಕಿ ತೀವ್ರವಾಗಿ ಅಸ್ವಸ್ಥಗೊಂಡಿದ್ದಾಳೆ.

ಮಗುವಿನ ಸ್ಥಿತಿ ಗಂಭೀರವಾಗಿ ರುವುದನ್ನು ಗಮನಿಸಿದ ಪೋಷಕರು ಗಾಬರಿಗೊಂಡು ತಕ್ಷಣವೇ ಆಕೆಯನ್ನು ಸಮೀಪದ ಸ್ಥಳೀಯ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಅಲ್ಲಿಂದ ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಕಳೆದ ಕೆಲವು ದಿನಗಳಿಂದ ತೀವ್ರ ಚಿಕಿತ್ಸೆಗೆ ಒಳಗಾಗಿದ್ದ ಜಾನು ಜೀವ ಉಳಿಸಲು ಹೋರಾಟ ನಡೆಸಿದರೂ, ಚಿಕಿತ್ಸೆ ಫಲಕಾರಿಯಾಗದೆ ಕೊನೆಗೆ ಸಾವನ್ನಪ್ಪಿದ್ದಾಳೆ.

ಕೇವಲ ಮೂರು ವರ್ಷದ ಮಗಳನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ಆವರಿಸಿದೆ. ಈ ದುರ್ಘಟನೆ ಕುರಿತು ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಬಾಂಗ್ಲಾದೇಶದಲ್ಲಿ ನಿಲ್ಲದ ಹಿಂಸಾಚಾರ: ಮತ್ತೊಬ್ಬ ಹಿಂದೂ ಯುವಕನ ಹತ್ಯೆ



**ಢಾಕಾ:** ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರ ಮೇಲಿನ ದಾಳಿಗಳು ಮತ್ತು ಹಿಂಸಾಚಾರದ ಘಟನೆಗಳು ಮುಂದುವರಿದಿದ್ದು, ಇತ್ತೀಚಿನ ದಿನಗಳಲ್ಲಿ ಅಲ್ಪಸಂಖ್ಯಾತ ಸಮುದಾಯದ ಮೇಲೆ ನಡೆಯುತ್ತಿರುವ ದಾಳಿಗಳು ದೇಶದೊಳಗೆ ಮಾತ್ರವಲ್ಲದೆ ಅಂತರರಾಷ್ಟ್ರೀಯ ಮಟ್ಟದಲ್ಲೂ ಗಂಭೀರ ಚರ್ಚೆಗೆ ಕಾರಣವಾಗಿವೆ. ಈ ನಡುವೆ ಮತ್ತೊಬ್ಬ ಹಿಂದೂ ಯುವಕ ಗುಂಪು ಹಲ್ಲೆಗೆ ಬಲಿಯಾಗಿರುವ ಘಟನೆ ಬಾಂಗ್ಲಾದೇಶವನ್ನು ಮತ್ತೆ ಬೆಚ್ಚಿಬೀಳಿಸಿದೆ.

ರಾಜ್‌ಬಾರಿ ಜಿಲ್ಲೆಯ ಪಾಂಗ್ಶಾ ಉಪವಿಭಾಗದಲ್ಲಿ 29 ವರ್ಷದ ಅಮೃತ್ ಮಂಡಲ್ ಅಲಿಯಾಸ್ ಸಾಮ್ರಾಟ್ ಎಂಬ ಹಿಂದೂ ಯುವಕನನ್ನು ಸ್ಥಳೀಯ ಗುಂಪೊಂದು ಡಿಸೆಂಬರ್ 24ರ ರಾತ್ರಿ ಸುಮಾರು 11 ಗಂಟೆಗೆ ಹಲ್ಲೆ ಮಾಡಿ ಕೊಂದಿದೆ. ಪೊಲೀಸರು ಆತನನ್ನು ಗಂಭೀರ ಸ್ಥಿತಿಯಲ್ಲಿ ರಕ್ಷಿಸಿ ಆಸ್ಪತ್ರೆಗೆ ಕೊಂಡೊಯ್ದರೂ, ಚಿಕಿತ್ಸೆ ಫಲಕಾರಿಯಾಗದೇ ಆತ ಮೃತಪಟ್ಟಿದ್ದಾನೆ. ಪಂಗಶಾ ಪೊಲೀಸ್ ಠಾಣೆಯ ಅಧಿಕಾರಿಗಳ ಪ್ರಕಾರ, ಸಾಮ್ರಾಟ್ ಹೊಸಾಯಿದಂಗ ಗ್ರಾಮದ ನಿವಾಸಿಯಾಗಿದ್ದು, ಆತ ಸುಲಿಗೆಕೋರನಾಗಿದ್ದನೆಂಬ ಆರೋಪವನ್ನು ಕೆಲವು ಸ್ಥಳೀಯರು ಮಾಡಿದ್ದಾರೆ. ಆದರೆ ಈ ಆರೋಪಗಳ ಸತ್ಯಾಸತ್ಯತೆ ಇನ್ನೂ ದೃಢಪಡಿಸಿಲ್ಲ. ಹಲ್ಲೆ ನಡೆದ ಕೂಡಲೇ ಸಾಮ್ರಾಟ್‌ನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಮಾರ್ಗ ಮಧ್ಯೆಯೇ ಆತ ಮೃತಪಟ್ಟಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಘಟನೆಯು ಕೆಲ ದಿನಗಳ ಹಿಂದೆ ನಡೆದ ಮತ್ತೊಂದು ಭೀಕರ ಹತ್ಯೆಯನ್ನು ನೆನಪಿಸುತ್ತದೆ. ದೀಪು ಚಂದ್ರದಾಸ್ ಎಂಬ ಹಿಂದೂ ವ್ಯಕ್ತಿಯನ್ನು ಗುಂಪು ಹಲ್ಲೆ ಮಾಡಿ ಕೊಂದ ಬಳಿಕ ಆತನ ಶವವನ್ನು ಸುಟ್ಟು ಹಾಕಲಾಗಿತ್ತು. ಆ ವೇಳೆ ದೀಪು ಇಸ್ಲಾಂ ಧರ್ಮ ನಿಂದನೆ ಮಾಡಿದ್ದಾನೆ ಎಂಬ ಆರೋಪವನ್ನು ಮುಂದಿಟ್ಟು ಹತ್ಯೆ ಮಾಡಿದ್ದಾಗಿ ಸಮರ್ಥಿಸಿಕೊಳ್ಳಲು ಪ್ರಯತ್ನಿಸಲಾಗಿತ್ತು. ಆದರೆ ನಂತರ ನಡೆದ ತನಿಖೆಯಲ್ಲಿ ಆ ಆರೋಪ ಸಂಪೂರ್ಣ ಸುಳ್ಳೆಂದು ಬಹಿರಂಗವಾಗಿತ್ತು.

ಇದೀಗ ಸಾಮ್ರಾಟ್ ಮೇಲೂ ಸುಲಿಗೆ ಆರೋಪ ಹೊರಿಸಿ, ಕೊಲೆಯನ್ನು ಸಮರ್ಥಿಸಿಕೊಳ್ಳಲು ಯತ್ನಿಸಲಾಗುತ್ತಿದೆಯೇ ಎಂಬ ಅನುಮಾನಗಳು ವ್ಯಕ್ತವಾಗುತ್ತಿವೆ. ಅಲ್ಪಸಂಖ್ಯಾತರನ್ನು ಗುರಿಯಾಗಿಸಿ ಸುಳ್ಳು ಆರೋಪಗಳ ನೆಪದಲ್ಲಿ ಹಲ್ಲೆ ನಡೆಸಲಾಗುತ್ತಿದೆ ಎಂಬ ಆಕ್ರೋಶ ಸಾಮಾಜಿಕ ಜಾಲತಾಣಗಳಲ್ಲೂ ವ್ಯಕ್ತವಾಗುತ್ತಿದೆ.

## ಬುಲೆಟ್‌ಗೆ ಗುದ್ದಿ ಅರ್ಧ ಕಿಮೀ ಎಳೆದೊಯ್ದ ಕಾರು

**ಬೆಂಗಳೂರು:** ಒಂದು ಅಘಾತಕಾರಿ ಘಟನೆಯೊಂದು ನಡೆದಿದೆ. ಬೆಂಗಳೂರಿನ ಸುಮ್ಮನಹಳ್ಳಿ ಫ್ಲೈಓವರ್‌ನಲ್ಲಿ ಒಂದು ಎಸ್‌ಯುವಿ ಕಾರೊಂದು ರಸ್ತೆಯಲ್ಲಿ ಅಡ್ಡಾದಿಡ್ಡಿ ಹೋಗಿದೆ. ಕಾರಿನ ಮುಂದೆ ಒಂದು ಬುಲೆಟ್ ಬೈಕ್ ಸಿಲುಕಿಕೊಂಡು ಅದನ್ನು ರಸ್ತೆ ಉದ್ದಕ್ಕೂ ಎಳೆದುಕೊಂಡು ಹೋಗಿದೆ. ಇದನ್ನು ನೋಡಿ ಇತರ ಸವಾರರು ಅಚ್ಚರಿಗೊಂಡಿದ್ದಾರೆ. ಇದೀಗ ಈ ಬಗ್ಗೆ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಕಾರಿನ ಪಕ್ಕದಲ್ಲಿದ್ದ ಮತ್ತೊಂದು ಕಾರಿನವರು ಎಷ್ಟೇ ಎಚ್ಚರಿಕೆ ನೀಡಿದ್ರು ಅದನ್ನು ಕೇಳಿಕೊಳ್ಳದೇ ಸುಮಾರು 500 ಮೀಟರ್‌ಗಳ ವರೆಗೆ ಬುಲೆಟ್ ಬೈಕ್‌ನ್ನು ಎಳೆದುಕೊಂಡು ಹೋಗಿದ್ದಾರೆ. ಇದರಿಂದ ಕಾರಿನ ಕೆಳಗಿನಿಂದ ಬೆಂಕಿ ಕಿಡಿಗಳು ಬಂದಿದೆ. ಈ ಘಟಮನೆಯಿಂದ ಜನನಿಬಿಡ ಪ್ರದೇಶದಲ್ಲಿ ಭೀತಿ ಉಂಟು ಮಾಡಿದೆ.



ಕೊನೆಗೆ ನಾಯಂಡಹಳ್ಳಿ ಜಂಕ್ಷನ್ ಬಳಿ ಕೋಪಗೊಂಡ ಇತರ ಪ್ರಯಾಣಿಕರು ಎಸ್‌ಯುವಿ ಕಾರು ಹಾಗೂ ಡ್ರೈವರ್‌ನ್ನು ತಡೆದು ಪೊಲೀಸರಿಗೆ ಒಪ್ಪಿಸಿದ್ದಾರೆ. ಇನ್ನು ಈ ಕೃತ್ಯವನ್ನು ಮಾಡಿದ ವ್ಯಕ್ತಿಯನ್ನು ತುಮಕೂರು ಜಿಲ್ಲೆಯ ಕುಣಿಗಲ್‌ನ ಶ್ರೀನಿವಾಸ್ ಕೆವಿ ಎಂದು ಗುರುತಿಸಲಾಗಿದೆ. ಮದ್ಯದ ಅಮಲಿನಲ್ಲಿ ವಾಹನ ಚಲಾಯಿಸುತ್ತಿದ್ದರು ಎಂದು ಪೊಲೀಸರು ಹೇಳಿದ್ದಾರೆ. ಇನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ತನಿಖೆ ನಡೆಸಿದಾಗ, ಈ ಕಾರು ಬೈಕ್ ಸವಾರನಿಗೆ ಡಿಕ್ಕಿ ಹೊಡೆದು ರಸ್ತೆ ಉದ್ದಕ್ಕೂ ಬೈಕ್‌ನ್ನು ಎಳೆದುಕೊಂಡು ಬಂದಿದ್ದಾರೆ ಎಂದು ಹೇಳಲಾಗಿದೆ. ದೂರಿನ ಪ್ರಕಾರ, ಶ್ರೀನಿವಾಸ್ ಅವರು ಬೈಕ್ ಓಡಿಸುತ್ತಿದ್ದ ರೋಹಿತ್ ಎಸ್ ಅವರ ಬುಲೆಟ್‌ಗೆ ಹಿಂಭಾಗದಿಂದ ಡಿಕ್ಕಿ ಹೊಡೆದು ರಸ್ತೆ ಉದ್ದಕ್ಕೂ ಎಳೆದುಕೊಂಡು ಬಂದಿದ್ದಾರೆ. ಈ ಬಗ್ಗೆ ಬೈಕ್ ಸವಾರ ದೂರಿನಲ್ಲಿ ಹೀಗೆ ಹೇಳಿದ್ದಾರೆ. "ನನ್ನ ಬೈಕ್‌ಗೆ ಡಿಕ್ಕಿ ಹೊಡೆದು ನನ್ನನ್ನು ಕೆಳಗೆ ಹಾಕಿ, ಬುಲೆಟ್‌ನ್ನು ರಸ್ತೆಯಲ್ಲಿ ಎಳೆದುಕೊಂಡು ಬಂದಿದ್ದಾರೆ" ಎಂದು ಹೇಳಿದ್ದಾರೆ. ಈ ಅಪಘಾತದಿಂದ ರೋಹಿತ್ ಅವರಿಗೆ ಯಾವುದೇ ತೊಂದರೆಗಳು ಆಗಿಲ್ಲ. ಬೈಕ್‌ಗೆ ದೊಡ್ಡ ಮಟ್ಟದ ಡ್ಯಾಮೇಜ್ ಆಗಿದೆ ಎಂದು ಹೇಳಲಾಗಿದೆ. ಇದೀಗ ಪೊಲೀಸ್ ತನಿಖೆಯಲ್ಲಿ ಶ್ರೀನಿವಾಸ್ ಅವರು ಮದ್ಯಪಾನ ಮಾಡಿದ್ದಾಗಿ ಒಪ್ಪಿಕೊಂಡಿದ್ದು, ಡಿಕ್ಕಿಯ ನಂತರ ಭಯಭೀತನಾಗಿದ್ದೆ, ತನ್ನ ಕಾರಿನ ಮುಂದೆ ಬೈಕ್ ಸಿಲುಕಿಕೊಂಡಿದೆ ಎಂಬ ತಿಳಿದಿರಲಿಲ್ಲ ಎಂದು ಹೇಳಿದ್ದಾರೆ. ಸಾರ್ವಜನಿಕರು ಶ್ರೀನಿವಾಸ್ ಅವರ ಈ ಹುಚ್ಚುತನಕ್ಕೆ ಕಾರನ್ನು ಪುಡಿಪುಡಿ ಮಾಡಿ, ಶ್ರೀನಿವಾಸ್‌ಗೆ ಹಿಗ್ಗಾಮುಗ್ಗಾ ಥಳಿಸಿದ್ದಾರೆ.

## ಹೊಸ ವರ್ಷ ಆಚರಣೆಗೆ ಬೆಂಗಳೂರು ಸಜ್ಜು: ಪಾರ್ಕ್, ಕೆರೆಗಳಿಗೆ ನೋ ಎಂಟ್ರಿ.!

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಹೊಸ ವರ್ಷ (2026) ಸ್ವಾಗತಿಸಲು ಜನತೆ ಸಜ್ಜಾಗುತ್ತಿದ್ದಂತೆ, ಪೊಲೀಸ್ ಇಲಾಖೆಯೂ ಹೈ ಅಲರ್ಟ್ ಆಗಿದೆ. ಅಹಿತಕರ ಘಟನೆಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಾತ್ರಿಪಡಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸಲಾಗಿದೆ. ಇದರ ಭಾಗವಾಗಿ ನಗರದ ಪಾರ್ಕ್‌ಗಳು, ಉದ್ಯಾನವನಗಳು ಮತ್ತು ಕೆರೆಗಳಿಗೆ ಪ್ರವೇ ನಿಷೇಧಿಸಲಾಗಿದೆ.




ಮುಖ್ಯ ಆಯುಕ್ತ ಮಹೇಶ್ವರ್ ರಾ ಅವರು ಆದೇಶ ಹೊರಡಿಸಿದ್ದು, ಡಿಸೆಂಬರ್ 31 ಸಂಜೆ 6 ಗಂಟೆಯಿಂದ ಜನವರಿ 1 ರ ಬೆಳಗ್ಗೆ 6 ಗಂಟೆಯವರೆಗೆ ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಎಲ್ಲಾ ಪಾರ್ಕ್‌ಗಳು, ಉದ್ಯಾನವನಗಳು ಮತ್ತು ಕೆರೆಗಳಿಗೆ ಸಾರ್ವಜನಿಕ ಪ್ರವೇಶ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಈ ನಿರ್ಬಂಧದ ಹಿಂದಿನ ಮುಖ್ಯ ಉದ್ದೇಶ ಯಾವುದೇ ಅಪಘಾತ, ಅಶಾಂತಿ ಅಥವಾ ಅಹಿತಕರ ಚಟುವಟಿಕೆಗಳನ್ನು ತಡೆಗಟ್ಟುವುದು. ಪೊಲೀಸರು ನಾಗರಿಕರಿಂದ ಸಹಕಾರ ಕೋರಿದ್ದಾರೆ ಮತ್ತು ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮದ ಎಚ್ಚರಿಕೆ ನೀಡಿದ್ದಾರೆ.

ಇದೇ ವೇಳೆ, ಪಬ್‌ಗಳು, ಬಾರ್‌ಗಳು ಮತ್ತು ರೆಸ್ಟೋರೆಂಟ್‌ಗಳ ಮೇಲೂ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಲಾಗಿದೆ. ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚು ಗ್ರಾಹಕರನ್ನು ಅನುಮತಿಸುವಂತಿಲ್ಲ. ಸಮಯ ಮೀರಿ ಸೇವೆ ನೀಡಿದರೆ ತಕ್ಷಣ ಕ್ರಮ ಜರುಗಿಸಲಾಗುತ್ತದೆ. ಪ್ರತಿ ಪಬ್ ಮತ್ತು ಬಾರ್‌ನಲ್ಲಿ ಸಿಸಿಟಿವಿ ಕ್ಯಾಮರಾಗಳು ಕಡ್ಡಾಯವಾಗಿರಬೇಕು. ವಿಶೇಷವಾಗಿ ಮಹಿಳೆಯರು ಹೆಚ್ಚಾಗಿ ಸೇರುವ ಸ್ಥಳಗಳು, ಎಂಟ್ರಿ-ಎಕ್ಸಿಟ್ ಪಾಯಿಂಟ್‌ಗಳು, ಡ್ಯಾನ್ಸ್ ಫ್ಲೋರ್ ಮತ್ತು ಪಾರ್ಕಿಂಗ್ ಪ್ರದೇಶಗಳಲ್ಲಿ ಕ್ಯಾಮರಾ ನಿಗಾ ಅಗತ್ಯ. ಫೈರ್ ಸೇಫ್ಟಿ, ಎಮರ್ಜೆನ್ಸಿ ಎಕ್ಸಿಟ್‌ಗಳು ಮತ್ತು ಮಾದಕ ವಸ್ತುಗಳ ನಿಯಂತ್ರಣಕ್ಕೂ ಕಟ್ಟುನಿಟ್ಟಿನ ಪರಿಶೀಲನೆ ನಡೆಯುತ್ತಿದೆ.

ಎಲೆಕ್ಟ್ರಾನಿಕ್ ಸಿಟಿ ಮತ್ತು ಇತರ ಐಟಿ ಹಬ್‌ಗಳಲ್ಲಿ ಭದ್ರತೆಯನ್ನು ಇನ್ನಷ್ಟು ಹೆಚ್ಚಿಸಲಾಗಿದೆ. ಡಿಸಿಪಿ ನಾರಾಯಣ್ ನೇತೃತ್ವದಲ್ಲಿ ಪ್ರಮುಖ ಪ್ರದೇಶಗಳಲ್ಲಿ ರೌಂಡ್ಸ್ ನಡೆಸಲಾಗುತ್ತಿದೆ. ನೀಲಾದ್ರಿ ನಗರ ಸೇರಿದಂತೆ ಜನದಟ್ಟಣೆ ಇರುವ ಸ್ಥಳಗಳಲ್ಲಿ ಬಂದೋಬಸ್ತ್ ಹೆಚ್ಚಿಸಲಾಗಿದೆ. ಪಿಜಿ ವಾಸಿಗಳು ಮತ್ತು ಮಹಿಳೆಯರ ಸುರಕ್ಷತೆಗಾಗಿ ರಾಣಿ ಚೆನ್ನಮ್ಮ ಪಡೆಯನ್ನು ನಿಯೋಜಿಸಲಾಗಿದೆ. ರೇವ್ ಪಾರ್ಟಿಗಳು, ಡ್ರಗ್ಸ್ ಸಂಬಂಧಿತ ಚಟುವಟಿಕೆಗಳು ಮತ್ತು ಡ್ರಂಕ್ ಅಂಡ್ ಡ್ರೈವ್‌ಗೆ ಸಂಪೂರ್ಣ ನಿಷೇಧವಿದೆ.

ಪೊಲೀಸ್ ಇಲಾಖೆಯು 'ಸೆಲೆಬ್ರೇಷನ್ ವಿತ್ ರೆಸ್ಪಾನ್ಸಿಬಿಲಿಟಿ' ಎಂಬ ಆನ್‌ಲೈನ್ ಅಭಿಯಾನ ಆರಂಭಿಸಿದೆ. ಇದರ ಮೂಲಕ QR ಕೋಡ್ ಸ್ಕ್ಯಾನ್ ಮಾಡಿ ತಕ್ಷಣ ದೂರು ದಾಖಲಿಸಬಹುದು ಮತ್ತು ಅಗತ್ಯ ಮಾಹಿತಿ ಪಡೆಯಬಹುದು. ಇದು ಸಾರ್ವಜನಿಕರಿಗೆ ತ್ವರಿತ ನೆರವು ಒದಗಿಸುವ ಉದ್ದೇಶವನ್ನು ಹೊಂದಿದೆ.

## ಸಾಕುನಾಯಿಯ ಅನಾರೋಗ್ಯಕ್ಕೆ ಮನನೊಂದು ಸಹೋದರಿಯರಿಬ್ಬರು ಆತ್ಮಹ*ತ್ಯೆ

ಇಬ್ಬರು ಸಹೋದರಿಯರು, ತಮ್ಮ ಪ್ರೀತಿಯ ಸಾಕುನಾಯಿಯ ಅನಾರೋಗ್ಯವನ್ನು ಸಹಿಸಲಾರದೆ ಆತ್ಮಹತ್ಯೆಯ ದಾರಿ ಹಿಡಿದ ಘಟನೆ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆದಿದೆ. ದೀರ್ಘಕಾಲದ ಖಿನ್ನತೆ ಮತ್ತು ನಾಯಿಯ ಮೇಲಿನ ಅತಿಯಾದ ಪ್ರೀತಿಯಿಂದ ಇಬ್ಬರು ಸಹೋದರಿಯರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಲಕ್ನೋದ ದೌಡಾ ಪ್ರದೇಶದ ನಿವಾಸಿಗಳಾದ ರಾಧಾ ಸಿಂಗ್ ಮತ್ತು ಜಿಯಾ ಸಿಂಗ್ ಎಂಬ ಸಹೋದರಿರು ಈ ಘಟನೆಯಲ್ಲಿ ಸಾವನ್ನಪ್ಪಿದ್ದಾರೆ. ಇಬ್ಬರೂ ವಿದ್ಯಾವಂತರಾಗಿದ್ದು, ಪದವಿ ಪೂರ್ಯೆಸಿದ್ದಾರೆ. ಆದರೆ, 2014ರಿಂದಲೇ ಇಬ್ಬರೂ ತೀವ್ರತರವಾದ ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದರು. ಹತ್ತು ವರ್ಷಗಳಿಂದ ಚಿಕಿತ್ಸೆ ಪಡೆಯುತ್ತಿದ್ದರೂ, ಯಾವುದೇ ಚೇತರಿಕೆ ಕಂಡಿರಲಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಅವರ ಮನೆಯಲ್ಲಿದ್ದ ಸಾಕುನಾಯಿ ಅವರಿಗೆ ದೊಡ್ಡ ಆಸರೆಯಾಗಿತ್ತು. ಕಳೆದ ಕೆಲವು ದಿನಗಳಿಂದ ಈ ಸಹೋದರಿಯರ ಪ್ರೀತಿಯ ಸಾಕುನಾಯಿ ತೀವ್ರವಾಗಿ ಅಸ್ವಸ್ಥಗೊಂಡಿತ್ತು. ದಿನದಿಂದ ದಿನಕ್ಕೆ ನಾಯಿಯ ಸ್ಥಿತಿ ಹದಗೆಡುತ್ತಿರುವುದನ್ನು ಕಂಡು ಈ ಸೋದರಿಯರು ಮಾನಸಿಕವಾಗಿ ಜರ್ಜರಿತರಾಗಿದ್ದರು. ನಾಯಿ ಗುಣಮುಖವಾಗುವ ಯಾವುದೇ ಲಕ್ಷಣಗಳು ಕಾಣದಿದ್ದಾಗ, ಇಬ್ಬರೂ ತೀವ್ರ ಮನನೊಂದಿದ್ದರು. ಈಗಾಗಲೇ ಖಿನ್ನತೆಯಲ್ಲಿದ್ದ ಅವರಿಗೆ ಇದು ಹೆಚ್ಚು ಆಘಾತವಾಗಿತ್ತು.

ಬುಧವಾರ ಬೆಳಿಗ್ಗೆ 11 ಗಂಟೆಯ ಸುಮಾರಿಗೆ ಇವರ ತಾಯಿ ಗುಲಾಬ್ ದೇವಿ ಅವರು ಮನೆಗೆ ಬೇಕಾದ ದಿನಸಿ ವಸ್ತುಗಳನ್ನು ತರಲು ಇಬ್ಬರನ್ನೂ ಅಂಗಡಿಗೆ ಕಳುಹಿಸಿದ್ದರು. ಸಾಮಾನು ತರಲು ಹೋದವರು ಹತಾಶೆಯಿಂದ ಫಿನಾಯಿಲ್ ಸೇವಿಸಿ ಮನೆಗೆ ಮರಳಿದ್ದಾರೆ. ತಾಯಿಯ ಮುಂದೆ ಬಂದು ನಾವು ಫಿನಾಯಿಲ್ ಕುಡಿದಿದ್ದೇವೆ ಎಂದಿದ್ದಾರೆ. ಕೂಡಲೇ ಮಗನನ್ನು ಕರೆಸಿ, ಇಬ್ಬರನ್ನೂ ರಾಣಿ ಲಕ್ಷ್ಮಿಬಾಯಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ಲಕ್ನೋದ ಟ್ರಾಮಾ ಸೆಂಟರ್‌ಗೆ ಸ್ಥಳಾಂತರಿಸಲಾಯಿತು. ದುರದೃಷ್ಟವಶಾತ್, ರಾಧಾ ಸಿಂಗ್ ಆಸ್ಪತ್ರೆಗೆ ತಲುಪುವಷ್ಟರಲ್ಲೇ ಮೃತಪಟ್ಟಿದ್ದರು. ಜಿಯಾ ಸಿಂಗ್ ಚಿಕಿತ್ಸೆಗೆ ಸ್ಪಂದಿಸದೆ ಸ್ವಲ್ಪ ಸಮಯದ ನಂತರ ಸಾವನ್ನಪ್ಪಿದ್ದಾರೆ. ಪೊಲೀಸರು ಸದ್ಯ ಪ್ರಕರಣ ದಾಖಲಿಸಿಕೊಂಡು ಮರಣೋತ್ತರ ಪರೀಕ್ಷೆಗೆ ಮೃತದೇಹಗಳನ್ನು ರವಾನಿಸಿದ್ದಾರೆ. ಸಾಕುಪ್ರಾಣಿಗಳು ಮನೆಯ ಸದಸ್ಯರಿದ್ದಂತೆ ನಿಜ, ಆದರೆ ಅವುಗಳ ಮೇಲಿನ ಅತೀವ ಅವಲಂಬನೆ ಮಾನಸಿಕ ವಾಗಿ ದುರ್ಬಲರಾದವರ ಮೇಲೆ ತೀವ್ರ ಪರಿಣಾಮ ಬೀರುತ್ತದೆ. ಖಿನ್ನತೆಯಿಂದ ಬಳಲುತ್ತಿರುವವರ ಬಗ್ಗೆ ಕುಟುಂಬಸ್ಥರು ಸದಾ ನಿಗಾ ಇಡುವುದು ಅನಿವಾರ್ಯ. ಮನೆಯಲ್ಲಿ ಮಾನಸಿಕ ಅಸ್ವಸ್ಥರು ಇದ್ದರೆ ಅವರ ಬಗ್ಗೆ ಅತೀವ ಕಾಳಜಿವಹಿಸಿ ಅಥವಾ ಹೆಚ್ಚಿನ ಸಹಾಯಕ್ಕಾಗಿ ಸ್ಥಳೀಯ ಚಿಕಿತ್ಸಾಲಕ್ಕೆ ಭೇಟಿ ಮಾಡಿ, ಚಿಕಿತ್ಸೆ ಪಡೆಯಿರಿ.

## ಮೈಸೂರು ಅರಮನೆ ಬಳಿ ನೈಟ್ರೋಜನ್ ಗ್ಯಾಸ್ ಬ್ಲಾಸ್ಟ್: ಇಬ್ಬರು ಸಾವು

**ಮೈಸೂರು:** ಅರಮನೆಯ ಮುಂಭಾಗ ಭೀಕರ ದುರಂತವೊಂದು ಸಂಭವಿಸಿದ್ದು, ನೈಟ್ರೋಜನ್ ಗ್ಯಾಸ್ ಸ್ಫೋಟದಿಂದ (Nitrogen Gas Blast) ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿ, ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.



ಅರಮನೆ ಮುಂಭಾಗದಲ್ಲಿ ಬಲೂನ್ ಮಾರಾಟ ಮಾಡುತ್ತಿದ್ದ ವೇಳೆ ಗ್ಯಾಸ್ ತುಂಬುವ ಸಂದರ್ಭ ನೈಟ್ರೋಜನ್ ಸಿಲಿಂಡರ್ ಅಚಾನಕ್ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆ ಭೀಕರವಾಗಿದ್ದು, ಸ್ಥಳದಲ್ಲಿದ್ದವರ ದೇಹ ಭಾಗಗಳು ಛಿದ್ರ ಛಿದ್ರಗೊಂಡಿವೆ. ಘಟನೆಯಲ್ಲಿ ಓರ್ವ ಮಹಿಳೆ ಹಾಗೂ ಓರ್ವ ಪುರುಷ ಸ್ಥಳದಲ್ಲೇ ಮೃತಪಟ್ಟಿದ್ದು, ಮೃತರ ಗುರುತು ಪತ್ತೆಹಚ್ಚುವ ಕಾರ್ಯ ನಡೆಯುತ್ತಿದೆ. ಈ ದುರಂತ ಸ್ಥಳದಲ್ಲಿದ್ದ ಇನ್ನೂ ನಾಲ್ವರು ಜನರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ತಕ್ಷಣ ಮೈಸೂರು ಕೆ.ಆರ್. ಆಸ್ಪತ್ರೆ (KR Hospital)ಗೆ ದಾಖಲಿಸಲಾಗಿದೆ. ಗಾಯಾಳುಗಳ ಪೈಕಿ ಕೆಲವರ ಸ್ಥಿತಿ ಚಿಂತಾಜನಕವಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆ ನಡೆದ ಕ್ಷಣದಲ್ಲಿ ಅರಮನೆ ಆವರಣದಲ್ಲಿ ಪ್ರವಾಸಿಗರು ಹಾಗೂ ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದುದರಿಂದ ಕೆಲಕಾಲ ಗೊಂದಲ ಮತ್ತು ಭಯದ ವಾತಾವರಣ ನಿರ್ಮಾಣವಾಯಿತು. ಮಾಹಿತಿ ದೊರಕುತ್ತಿದ್ದಂತೆ ಸ್ಥಳಕ್ಕೆ ಪೊಲೀಸ್ ಠಾಣೆಯ ಸಿಬ್ಬಂದಿ ಹಾಗೂ ಹಿರಿಯ ಅಧಿಕಾರಿಗಳು ದೌಡಾಯಿಸಿದ್ದು, ಪರಿಶೀಲಿಸುತ್ತಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.